ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ, ಶ್ರೀ ಮಧು ಜಿ.ಮಾದೇಗೌಡ ಹಾಗೂ ಶ್ರೀ ಎಸ್.ಎಲ್.ಭೋಜೇಗೌಡ ಇವರು ನಿಯಮ 330 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ.**

*********

**ಪ್ರಶ್ನೆ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ವಸತಿ ಶಾಲೆಗಳಲ್ಲಿ ಖಾಯಂ ಶಿಕ್ಷಕರನ್ನು ದೀರ್ಘಕಾಲದಿಂದ ನೇಮಕಾತಿ ಮಾಡಿಕೊಳ್ಳದೆ ಇದ್ದು, ಇತರೆ ಇಲಾಖೆಗಳಿಂದ ಎರವಲು ಸೇವೆಯ ಮೇಲೆ ನಿಯೋಜಿಸಿಕೊಂಡಿರುವ ಶಿಕ್ಷಕರಿಗೆ ಯಾವುದೇ ತರಬೇತಿಗಳು ಇರುವುದಿಲ್ಲ. ವಸತಿ ಶಾಲೆಗಳನ್ನು 12ನೇ ತರಗತಿಯವರೆಗೆ ಉನ್ನತೀಕರಿಸದೆ ಇರುವುದು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ವಸತಿ ಶಾಲೆಗಳಲ್ಲಿ ದೀರ್ಘ ಕಾಲದಿಂದ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರದೆ ಇರುವುದು, ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಿಗೆ ಉಪನಿರ್ದೇಶಕರ ಹುದ್ದೆಗೆ ಬಡ್ತಿಗೆ ಪರಿಗಣಿಸದೆ ಇರುವುದು, ಕಲೆ ಮತ್ತು ಕ್ರಾಪ್ಟ್ ಶಿಕ್ಷಕರಿಗೆ ಶಾಲಾ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ನೀಡುವ ವೇತನಕ್ಕೆ ಸಮಾನವಾದ ವೇತನವನ್ನು ನಿಗದಿಗೊಳಿಸದೆ ಇರುವುದು, 2018 ರ ವೇತನ ಆಯೋಗದ ಒಂದು ವೇತನ (ಸ್ಟೆಪ್ ಅಪ್ ) ತಾರತಮ್ಯ ನಿವಾರಿಸದೆ ಇರುವುದು, ದೈಹಿಕ ಶಿಕ್ಷಕರಿಗೆ ಪದೋನ್ನತಿ ನೀಡದೆ ಇರುವುದು, ಶ್ರೀ ಕುಮಾರ ನಾಯ್ಕ ವರದಿ ಪ್ರಕಾರ ಒಂದು ವೇತನ ಭತ್ಯೆಯನ್ನು ನೀಡದೆ ಇರುವುದು ಮುಂತಾದ ಗಂಭೀರ ಸಮಸ್ಯೆಗಳ ಕುರಿತು ಮಾನ್ಯ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರ ಗಮನಸೆಳೆಯಬಯಸುತ್ತೇವೆ.

**ಉತ್ತರ:-**

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದ ವಸತಿ ಶಾಲೆಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಪ್ರಸ್ತುತದವರೆಗೂ 818 ಖಾಯಂ ಶಿಕ್ಷಕರು ನೇರ ನೇಮಕಾತಿಯಡಿ ಭರ್ತಿಯಾಗಿ ಕಾರ್ಯನಿರ್ವಹಿಸುತ್ತಿರುತ್ತಾರೆ ಹಾಗೂ ಇತರೆ ಯಾವುದೇ ಇಲಾಖೆಯಿಂದ ಶಿಕ್ಷಕರನ್ನು ಎರವಲು ಸೇವೆಯ ಮೇಲೆ ನಿಯೋಜಿಸಿಕೊಂಡಿರುವುದಿಲ್ಲ.

ಪ್ರಸ್ತುತ ಅಲ್ಪಸಂಖ್ಯಾತರ ನಿರ್ದೇಶನಾಲಯದಲ್ಲಿ 95 ಮೊರಾರ್ಜಿದೇಸಾಯಿ ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಇದರಲ್ಲಿ ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ 346 ಎಂಡಿಎಸ್ 2023, ದಿನಾಂಕ:30.10.2023ರಂತೆ 62 ಶಾಲೆಗಳನ್ನು 6ನೇ ತರಗತಿಯಿಂದ 12ನೇ ತರಗತಿಯವರೆಗೆ Integrated ಶಾಲೆಗಳನ್ನಾಗಿ ಉನ್ನತೀಕರಿಸಲಾಗಿದೆ.

ಪ್ರಸ್ತುತ ಚಾಲ್ತಿಯಲ್ಲಿರುವ ಇಲಾಖೆಯ 2011ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರ ಹುದ್ದೆಅಥವಾ ಅವರಿಗೆ ಬಡ್ತಿ ನೀಡುವ ಬಗ್ಗೆ ಯಾವುದೇ ಪ್ರಸ್ತಾಪನೆ ಇರುವುದಿಲ್ಲ. ಮುಂದುವರೆದು, ಸದರಿ ವೃಂದ ಮತ್ತು ನೇಮಕಾತಿ ನಿಯಮಗಳ ಪರಿಷ್ಕರಣೆ ಮಾಡುವ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ.

.....2

ಮುಂದುವರೆದು, ಕಲೆ ಮತ್ತು ಕ್ರಾಫ್ಟ್ ಶಿಕ್ಷಕರಿಗೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಶಿಕ್ಷಕರಿಗೆ ನೀಡುವ ವೇತನಕ್ಕೆ ಸಮಾನವಾದ ವೇತನವನ್ನು ನಿಗದಿಗೊಳಿಸುವ ಬಗ್ಗೆ ಇಲಾಖೆಯಿಂದ ಈಗಾಗಲೇ 7ನೇ ರಾಜ್ಯ ವೇತನ ಆಯೋಗದ ಮುಂದೆ ಬೇಡಿಕೆ ಸಲ್ಲಿಸಲಾಗಿರುತ್ತದೆ.

2018ರ ವೇತನ ಆಯೋಗದ ಜಾರಿಯಿಂದ ಉಂಟಾದ ಹಿರಿಯ ಕಿರಿಯ ನೌಕರರ ವೇತನ ತಾರತಮ್ಯದ ಕುರಿತು ಇಲಾಖೆಗೆ ಕಾಲಕಾಲಕ್ಕೆ ಸ್ವೀಕೃತವಾಗಿರುವ ಪ್ರಸ್ತಾವನೆಗಳನ್ನು ನಿಯಮಾನುಸಾರ ಪರಿಶೀಲಿಸಿ ಅರ್ಹನೌಕರರಿಗೆ ವೇತನ ತಾರತಮ್ಯವನ್ನು ನಿವಾರಿಸಲಾಗುತ್ತಿದೆ.

ಪ್ರಸ್ತುತ ಚಾಲ್ತಿಯಲ್ಲಿರುವ ಇಲಾಖೆಯ 2011ರ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ದೈಹಿಕಶಿಕ್ಷಣ ಶಿಕ್ಷಕರಿಗೆ ಪದೋನ್ನತಿ ನೀಡುವ ಬಗ್ಗೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಶಿಕ್ಷಕರಿಗೆ ಶ್ರೀಕುಮಾರ್ ನಾಯ್ಕ ವರದಿ ಪ್ರಕಾರ ಒಂದು ವೇತನ ಭತ್ಯೆಯನ್ನು ನೀಡುವುದರ ಬಗ್ಗೆ ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ.

ಕಡತ ಸಂಖ್ಯೆ: MWD 106 LMQ 2023

(ಬಿ.ಜೆಡ್.ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು